**All India Radio: Bangalore**
**National Bulletin In Kannada**
**16.02.2026  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**16.02.2026  1.10 p.m.**

**<><><><>**

ಮುಖ್ಯಾಂಶಗಳು

1. ನವದೆಹಲಿಯ ಭಾರತ ಮಂಟಪಂನಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಅವರಿಂದ 'ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ'ಗೆ ಚಾಲನೆ
2. ೩೭೦ನೇ ವಿಧಿ ರದ್ದತಿಯ ನಂತರ ಕಾಶ್ಮೀರದಲ್ಲಿ ಶೇಕಡಾ ೮೦ ರಷ್ಟು ತಗ್ಗಿದ ಹಿಂಸಾಚಾರ - ಕೇಂದ್ರ ಗೃಹ ಸಚಿವ ಅಮಿತ್ ಶಾ
3. ಎರಡು ದಿನಗಳ ಭೇಟಿಗಾಗಿ ಬೆಂಗಳೂರಿಗೆ ಆಗಮಿಸಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್
4. ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್; ಡಿ ಗುಂಪಿನ ಪಂದ್ಯದಲ್ಲಿ ಅಫ್ಘಾನಿಸ್ತಾನಕ್ಕೆ ೧೬೧ ರನ್‌ಗಳ ಗುರಿ ನೀಡಿದ ಯುಎಇ

<><><><>

ನವದೆಹಲಿಯ ಭಾರತ ಮಂಟಪಂನಲ್ಲಿಂದು ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ-೨೦೨೬ ಅನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಉದ್ಘಾಟಿಸಲಿದ್ದಾರೆ. ಇಂದಿನಿಂದ ಇದೇ ೨೦ರವರೆಗೆ ನಡೆಯಲಿರುವ ಐದು ದಿನಗಳ ಈ ಶೃಂಗಸಭೆ, ಜಾಗತಿಕ ದಕ್ಷಿಣ ರಾಷ್ಟ್ರದಲ್ಲಿ ಆಯೋಜಿಸಲಾಗುತ್ತಿರುವ ಮೊದಲ ಜಾಗತಿಕ ಎಐ ಶೃಂಗಸಭೆಯಾಗಿದೆ.

ನೂರಕ್ಕೂ ಹೆಚ್ಚು ದೇಶಗಳು ಈ ಶೃಂಗಸಭೆಯಲ್ಲಿ ಭಾಗವಹಿಸಲಿದ್ದು, ಎರಡು ಲಕ್ಷಕ್ಕೂ ಹೆಚ್ಚು ಜನರು ಆನ್‌ಲೈನ್‌ನಲ್ಲಿ ನೋಂದಾಯಿಸಿಕೊಂಡಿದ್ದಾರೆ. ಆಸ್ಟ್ರೇಲಿಯಾ, ಜಪಾನ್, ರಷ್ಯಾ, ಬ್ರಿಟನ್, ಫ್ರಾನ್ಸ್ ಸೇರಿದಂತೆ ೧೩ ದೇಶಗಳ ಮಳಿಗೆಗಳನ್ನು ಇದು ಒಳಗೊಂಡಿರಲಿದೆ. ೩೦೦ಕ್ಕೂ ಹೆಚ್ಚು ಪ್ರದರ್ಶನ ಮಳಿಗೆಗಳಲ್ಲಿ ನೇರ ಪ್ರದರ್ಶನಗಳನ್ನು ಆಯೋಜಿಸಲಾಗಿದೆ. ಪ್ರಧಾನಿ ನರೇಂದ್ರ ಮೋದಿಯವರ ಆಹ್ವಾನದ ಮೇರೆಗೆ, ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್, ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲುಲಾ ಡ ಸಿಲ್ವಾ ಮತ್ತು ಗ್ರೀಸ್ ಪ್ರಧಾನಿ ಕಿರಿಯಾಕೋಸ್ ಮಿಟ್ಸೋಟಾಕಿಸ್ ಸೇರಿದಂತೆ ಹಲವು ವಿಶ್ವ ನಾಯಕರು ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ.

ಅಲ್ಲದೇ, ೪೫ ಕ್ಕೂ ಹೆಚ್ಚು ದೇಶಗಳ ನಿಯೋಗಗಳು ಶೃಂಗಸಭೆಯಲ್ಲಿ ಭಾಗವಹಿಸಲಿವೆ. ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಮತ್ತು ಹಲವಾರು ಅಂತಾರಾಷ್ಟ್ರೀಯ ಸಂಸ್ಥೆಗಳ ಹಿರಿಯ ಅಧಿಕಾರಿಗಳು ಸಹ ಚರ್ಚೆಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

<><><>

ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ, ಇಂಟೆಲ್ ಇಂಡಿಯಾ ಸಹಯೋಗದೊಂದಿಗೆ, ನೈತಿಕ, ಅಂತರ್ಗತ ಮತ್ತು ಜವಾಬ್ದಾರಿಯುತ ಕೃತಕಬುದ್ಧಿಮತ್ತೆ ಬಳಕೆಯನ್ನು ಉತ್ತೇಜಿಸುವ ಡಿಜಿಟಲ್ ಅಭಿಯಾನಕ್ಕೆ ದೇಶಾದ್ಯಂತದ ಇಂದು ಚಾಲನೆ ದೊರೆತಿದೆ. ಈ ಉಪಕ್ರಮದ ಮೂಲಕ, ೨೪ ಗಂಟೆಗಳಲ್ಲಿ 'ಕೃತಕ ಬುದ್ಧಿಮತ್ತೆಯ ಅಭಿಯಾನಕ್ಕಾಗಿ ಸ್ವೀಕರಿಸಲಾದ ಅತಿ ಹೆಚ್ಚು ಪ್ರತಿಜ್ಞೆಗಳು' ಎಂಬ ಅಧಿಕೃತ ಗಿನ್ನೆಸ್ ವಿಶ್ವ ದಾಖಲೆ ನಿರ್ಮಿಸಲು ಪ್ರಯತ್ನಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ. ಇಂಡಿಯಾ ಎಐ ಮಿಷನ್ ಅಡಿಯಲ್ಲಿ ನಡೆಯುವ ಈ ಅಭಿಯಾನ, ವಿಶ್ವಾಸಾರ್ಹ ಮತ್ತು ಮಾನವ-ಕೇಂದ್ರಿತ ಕೃತಕ-ಬುದ್ಧಿಮತ್ತೆ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಭಾರತದ ಬದ್ಧತೆಯನ್ನು ಬಲಪಡಿಸುವ ಗುರಿ ಹೊಂದಿದೆ. ಈ ಉಪಕ್ರಮ, ಸನ್ನಿವೇಶ ಆಧಾರಿತ ಪ್ರಶ್ನೆಗಳನ್ನು ಒಳಗೊಂಡಿದ್ದು, ಭಾಗವಹಿಸುವವರು, ಔಪಚಾರಿಕ ಪ್ರತಿಜ್ಞೆ ಸ್ವೀಕಿರಿಸುವ ಮೊದಲು ಜವಾಬ್ದಾರಿಯುತ ಕೃತಕ ಬುದ್ಧಿಮತ್ತೆ ಅಭ್ಯಾಸಗಳ ಬಗ್ಗೆ ಚಿಂತಿಸಲು ಪ್ರೇರೇಪಿಸುತ್ತದೆ.

<><><>

ಭಾರತ ಮತ್ತು ಅಮೆರಿಕ ನಡುವಿನ ಮಧ್ಯಂತರ ವ್ಯಾಪಾರ ಒಪ್ಪಂದವನ್ನು ಭಾರತೀಯ ಮಸಾಲೆ ಪಾಲುದಾರರ ಒಕ್ಕೂಟ ಶ್ಲಾಘಿಸಿದೆ. ಆಕಾಶವಾಣಿಯೊಂದಿಗೆ ಮಾತನಾಡಿದ ಭಾರತೀಯ ಮಸಾಲೆ ಪಾಲುದಾರರ ಒಕ್ಕೂಟದ ಅಧ್ಯಕ್ಷ ತೇಜಸ್ ಗಾಂಧಿ, ಈ ಒಪ್ಪಂದವು, ಹೊಸ ಅವಕಾಶಗಳನ್ನು ಸೃಷ್ಟಿಸುವ ಮೂಲಕ ಮಾರುಕಟ್ಟೆ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುತ್ತದೆ. ಸುಂಕ ಕಡಿತವು, ಭಾರತೀಯ ಸರಕುಗಳ ರಫ್ತುಗಳನ್ನು ಹೆಚ್ಚಿಸುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><>

೩೭೦ನೇ ವಿಧಿ ರದ್ದತಿಯ ನಂತರ ಕಾಶ್ಮೀರದಲ್ಲಿ ಹಾಗೂ ಈಶಾನ್ಯ ಮತ್ತು ಮಾವೋವಾದಿ ಪೀಡಿತ ಪ್ರದೇಶಗಳಲ್ಲಿ ಹಿಂಸಾಚಾರದ ಪ್ರಮಾಣ ಶೇಕಡಾ ೮೦ ರಷ್ಟು ತಗ್ಗಿದೆ. ಈ ಪ್ರದೇಶಗಳು ಹಿಂಸಾಚಾರದಿಂದ ಸಂಪೂರ್ಣವಾಗಿ ಮುಕ್ತವಾಗುವ ದಿನ ದೂರವಿಲ್ಲ ಎಂದು ಕೇಂದ್ರ ಗೃಹ ಸಚಿವ

ಅಮಿತ್ ಶಾ ಆಶಯ ವ್ಯಕ್ತಪಡಿಸಿದ್ದಾರೆ. ದೆಹಲಿ ಪೊಲೀಸರ ೭೯ ನೇ ಸಂಸ್ಥಾಪನಾ ದಿನಾಚರಣೆಯ ಸಂದರ್ಭದಲ್ಲಿ ಮಾತನಾಡಿದ ಸಚಿವರು, ೧೧ ರಾಜ್ಯಗಳಲ್ಲಿ ಹರಡಿರುವ ಎಡಪಂಥೀಯ ಉಗ್ರವಾದ, ದೇಶದ ಆಂತರಿಕ ಭದ್ರತೆಗೆ ಸದಾ ಗಮನಾರ್ಹ ಸವಾಲನ್ನು ಒಡ್ಡಿದೆ ಎಂದು ತಿಳಿಸಿದರು.

**ಅಮಿತ್ ಶಾ ಧ್ವನಿ ಕೇಂದ್ರ ಗೃಹ ಸಚಿವ( ೧೯ ಸೆಕೆಂಡ್ಸ್)**

ಪೊಲೀಸ್ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಅಂದಾಜು ೩೪೫ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಲಿರುವ ದೆಹಲಿ ಪೊಲೀಸ್ ವಿಶೇಷ ವಿಭಾಗದ ಪ್ರಧಾನ ಕಚೇರಿಗೆ ಅಡಿಪಾಯ ಹಾಕಿ ಅವರು ಮಾತನಾಡಿದರು. ಮಾದಕವಸ್ತು ಕಳ್ಳಸಾಗಣೆ ಮತ್ತು ಭಯೋತ್ಪಾದನೆಯನ್ನು ಎದುರಿಸಲು ದೇಶದ ಅತ್ಯಾಧುನಿಕ ಕೇಂದ್ರಗಳಲ್ಲಿ ಇದು ಒಂದಾಗಲಿದೆ ಎಂದರು. ಕಳೆದ ಹನ್ನೊಂದು ವರ್ಷಗಳಲ್ಲಿ, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ, ಮೂರು ಹೊಸ ಕ್ರಿಮಿನಲ್ ಕಾನೂನುಗಳನ್ನು ಪರಿಚಯಿಸುವುದು ಸೇರಿದಂತೆ ಹಲವಾರು ಮೈಲಿಗಲ್ಲುಗಳನ್ನು ಸಾಧಿಸಲಾಗಿದೆ ಎಂದು ಸಚಿವ ಅಮಿತ್ ಶಾ ಹೇಳಿದರು.

<><><>

ಬೆಂಗಳೂರಿನ ವಿವಿಧ ಕಾರ್ಯಕ್ರಮಗಳು ಹಾಗೂ ಸಭೆಗಳಲ್ಲಿ ಭಾಗವಹಿಸಲು ಎರಡು ದಿನಗಳ ಬೆಂಗಳೂರು ಪ್ರವಾಸ ಕೈಗೊಂಡಿರುವ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಇಂದು ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಆಗಮಿಸಿದರು. ಇಂದು ಅವರು, ರಕ್ಷಣಾ ವಲಯದ ವಿವಿಧ ಸಂಸ್ಥೆಗಳಿಗೆ ಭೇಟಿ ನೀಡಲಿದ್ದಾರೆ. ನಾಳೆ ಅವರು, ಫ್ರಾನ್ಸ್ ರಕ್ಷಣಾ ಸಚಿವ ಕ್ಯಾಥರಿನ್ ವೌಟ್ರಿನ್ ಅವರನ್ನು ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಳ್ಳಲಿದ್ದಾರೆ. ನಂತರ ಉಭಯ ನಾಯಕರು ೬ನೇ ಭಾರತ-ಫ್ರಾನ್ಸ್ ವಾರ್ಷಿಕ ರಕ್ಷಣಾ ಸಂವಾದದಲ್ಲಿ ಭಾಗವಹಿಸಲಿದ್ದಾರೆ. ಈ ಸಭೆ, ಉಭಯ ದೇಶಗಳ ನಡುವಿನ ರಕ್ಷಣಾ ಸಹಕಾರದ ಸಂಪೂರ್ಣ ವ್ಯಾಪ್ತಿಯನ್ನು ಪರಿಶೀಲಿಸಲಿದೆ. ಕೈಗಾರಿಕಾ ಸಹಯೋಗವನ್ನು ವಿಸ್ತರಿಸುವತ್ತ ಗಮನ ಹರಿಸಲಿದ್ದು, ರಕ್ಷಣಾ ಸಹಕಾರ ಒಪ್ಪಂದವನ್ನು ಮುಂದಿನ ೧೦ ವರ್ಷಗಳ ಕಾಲ ನವೀಕರಿಸುವ ನಿರೀಕ್ಷೆಯಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಈ ವೇಳೆ 'ಹ್ಯಾಮರ್' ಕ್ಷಿಪಣಿಗಳ ತಯಾರಿಕೆಗಾಗಿ ಜಂಟಿ ಉದ್ಯಮದ ಕುರಿತು ತಿಳುವಳಿಕೆ ಪತ್ರಕ್ಕೆ ಸಹಿ ಹಾಕುವ ನಿರೀಕ್ಷೆಯಿದೆ. ಭಾರತೀಯ ಸೇನೆ ಮತ್ತು ಫ್ರಾನ್ಸ್ ಭೂಸೇನೆಗಳಲ್ಲಿ ಅಧಿಕಾರಿಗಳ

ಪರಸ್ಪರ ನಿಯೋಜನೆಯ ಬಗ್ಗೆ ಘೋಷಣೆ ಹೊರಬೀಳುವ ಸಾಧ್ಯತೆಯಿದೆ ಎಂದು ಸಚಿವಾಲಯ ತಿಳಿಸಿದೆ. ಇದೇ ವೇಳೆ, ಕರ್ನಾಟಕದ ವೇಮಗಲ್‌ನಲ್ಲಿ ಟಾಟಾ ಏರ್‌ಬಸ್‌ನ ಹೆಚ್-೧೨೫ ಲಘು ಹೆಲಿಕಾಪ್ಟರ್ ಅನ್ನು ಪ್ರಧಾನಿ ನರೇಂದ್ರ ಮೋದಿ ಮತ್ತು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ವರ್ಚುವಲ್ ಮೂಲಕ ಉದ್ಘಾಟಿಸಲಿದ್ದಾರೆ.

<><><>

ಕಾನೂನು ಉಲ್ಲಂಘನೆ ಹಾಗೂ ಅಕ್ರಮಗಳ ಆರೋಪದ ಮೇಲೆ ಪಶ್ಚಿಮ ಬಂಗಾಳದಲ್ಲಿ ಏಳು ಮಂದಿ ಸಹಾಯಕ ಚುನಾವಣಾ ನೋಂದಣಿ ಅಧಿಕಾರಿಗಳನ್ನು ಚುನಾವಣಾ ಆಯೋಗ ಅಮಾನತುಗೊಳಿಸಿದೆ. ಅಮಾನತುಗೊಂಡ ಅಧಿಕಾರಿಗಳ ವಿರುದ್ಧ ಸಂಬಂಧಪಟ್ಟ ಕೇಡರ್ ನಿಯಂತ್ರಣ ಪ್ರಾಧಿಕಾರವು, ಯಾವುದೇ ವಿಳಂಬವಿಲ್ಲದೆ ಶಿಸ್ತುಕ್ರಮ ಕೈಗೊಳ್ಳಬೇಕು. ಈ ಕುರಿತು ಆಯೋಗಕ್ಕೆ ಮಾಹಿತಿ ನೀಡಬೇಕು ಎಂದು ಚುನಾವಣಾ ಆಯೋಗ ನಿರ್ದೇಶಿಸಿದೆ.

<><><>

ಯುದ್ಧದಿಂದ ಹಾನಿಗೊಳಗಾದ ಗಾಜಾದ ಪುನರ್ ನಿರ್ಮಾಣಕ್ಕೆ ಹೊಸದಾಗಿ ರಚಿಸಲಾದ ಶಾಂತಿ ಮಂಡಳಿಯ ಸದಸ್ಯರು ಐದು ಶತಕೋಟಿ ಡಾಲರ್‌ಗಳ ನೆರವು ನೀಡುವ ವಾಗ್ದಾನ ನೀಡಿದ್ದಾರೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಹಾನಿ ಪ್ರದೇಶಗಳ ನವೀಕರಣಕ್ಕೆ ಸಾವಿರಾರು ಸಿಬ್ಬಂದಿ ಹಾಗೂ ಸುರಕ್ಷತೆಗಾಗಿ ಪೊಲೀಸ್ ಪಡೆಗಳನ್ನು ನಿಯೋಜಿಸಲಾಗುವುದು. ಮೊದಲ ಸಭೆಗಾಗಿ ಇದೇ ಗುರುವಾರ ವಾಷಿಂಗ್ಟನ್‌ನಲ್ಲಿ ಶಾಂತಿ ಮಂಡಳಿ ಸದಸ್ಯರು ಒಟ್ಟುಗೂಡಲಿದ್ದು, ಈ ವೇಳೆ ಈ ಕುರಿತು ಅಧಿಕೃತ ಘೋಷಣೆ ಪ್ರಕಟಿಸಲಾಗುವುದು ಎಂದು ಅಧ್ಯಕ್ಷ ಟ್ರಂಪ್ ಮಾಹಿತಿ ನೀಡಿದ್ದಾರೆ.

<><><>

ದೆಹಲಿಯ ಅರುಣ್ ಜೇಟ್ಲಿ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಪುರುಷರ ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಡಿ ಗುಂಪಿನಲ್ಲಿ ಪಂದ್ಯದಲ್ಲಿ ಯುಎಇ ತಂಡ, ಅಫ್ಘಾನಿಸ್ತಾನಕ್ಕೆ ೧೬೧ ರನ್‌ಗಳ ಗೆಲುವಿನ ಗುರಿ ನೀಡಿದೆ.

ಮೊದಲು ಬ್ಯಾಟಿಂಗ್ ಮಾಡಿದ ಯುಎಇ, ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೬೦ ರನ್ ಮಾಡಿದೆ. ಕೊಲ್ಕತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿರುವ ಸಿ ಗುಂಪಿನ ಪಂದ್ಯದಲ್ಲಿ ಇಟಲಿ ತಂಡ, ಇಂಗ್ಲೆಂಡ್ ತಂಡವನ್ನು ಎದುರಿಸಲಿದೆ.

ಶ್ರೀಲಂಕಾದ ಪಲ್ಲಿಕ್ಕಿಲೆ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ಬಿ ಗುಂಪಿನ ಪಂದ್ಯದಲ್ಲಿ ಶ್ರೀಲಂಕಾ ವಿರುದ್ಧ ಆಸ್ಟ್ರೇಲಿಯಾ ಸೆಣಸಾಟ ನಡೆಸಲಿದೆ. ಪಂದ್ಯ ರಾತ್ರಿ ೭ ಗಂಟೆಗೆ ಪ್ರಾರಂಭವಾಗಲಿದೆ.

<><><>

ಲೆಬಾನಾನ್-ಸಿರಿಯಾ ಗಡಿಯ ಬಳಿ ವಾಹನವೊಂದನ್ನು ಗುರಿಯಾಗಿಸಿಕೊಂಡು ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ನಾಲ್ವರು ಮೃತಪಟ್ಟಿದ್ದಾರೆ. ಲೆಬೆನಾನ್‌ನ ರಾಷ್ಟ್ರೀಯ ಸುದ್ದಿಸಂಸ್ಥೆಯ ಪ್ರಕಾರ, ನಿನ್ನೆ ರಾತ್ರಿ ಲೆಬೆನಾನ್- ಸಿರಿಯಾ ಗಡಿಯ ಬಳಿ ಮಜ್ದಲ್ ಅಂಜರ್ ಪ್ರದೇಶದಲ್ಲಿ ಇಸ್ರೇಲ್ ನಡೆಸಿದ ಡ್ರೋನ್ ದಾಳಿಯಿಂದ ಕಾರೊಂದು ಸ್ಫೋಟಗೊಂಡಿದೆ. ಈ ಕುರಿತು ಸ್ಪಷ್ಟೀಕರಣ ನೀಡಿರುವ ಇಸ್ರೇಲ್ ಸೇನೆ, ಪ್ಯಾಲಿಸ್ತೇನ್‌ನ ಉಗ್ರಗಾಮಿ ಸಂಘಟನೆಯಾದ ಇಸ್ಲಾಮಿಕ್ ಜಿಹಾದ್‌ಗೆ ಸೇರಿದ ಉಗ್ರರನ್ನು ಗುರಿಯಾಗಿಸಿಕೊಂಡು ಈ ದಾಳಿ ನಡೆಸಲಾಗಿದೆ ಎಂದು ತಿಳಿಸಿದೆ.

<><><>

ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಅವರು ಇಂದಿನಿಂದ ಆಸ್ಟ್ರೇಲಿಯಾಕ್ಕೆ ನಾಲ್ಕು ದಿನಗಳ ಭೇಟಿಯನ್ನು ಕೈಗೊಳ್ಳಲಿದ್ದಾರೆ. ಈ ಭೇಟಿಯು, ಭಾರತ-ಆಸ್ಟ್ರೇಲಿಯಾ ರಕ್ಷಣಾ ಸಹಕಾರ ಮತ್ತಷ್ಟು ಬಲಪಡಿಸುವುದು ಹಾಗೂ ಉಭಯ ರಾಷ್ಟ್ರಗಳ ನಡುವಿನ ಸಂಬಂಧ ಬಲಪಡಿಸುವ ಗುರಿ ಹೊಂದಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಭೇಟಿಯ ಸಮಯದಲ್ಲಿ, ಸೇನಾ ಮುಖ್ಯಸ್ಥರು ಆಸ್ಟ್ರೇಲಿಯಾದ ರಕ್ಷಣಾ ಪಡೆಯ ಹಿರಿಯ ನಾಯಕರೊಂದಿಗೆ ವ್ಯಾಪಕ ಸಂವಾದ ನಡೆಸಲಿದ್ದಾರೆ. ತರಬೇತಿ, ಜಂಟಿ ಸಮರಾಭ್ಯಾಸ, ವೃತ್ತಿಪರ ವಿನಿಮಯ ಮತ್ತು ಸಾಮರ್ಥ್ಯ ವೃದ್ಧಿ ಸೇರಿದಂತೆ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಯಲಿವೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>